# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:05ನೇ ಜುಲೈ, 2023**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

## 02. ಚುನಾವಣಾ ಪ್ರಸ್ತಾವಗಳು

ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:-

**2023-24ನೇ ಸಾಲಿನ ವಿಧಾನ ಮಂಡಲದ ಜಂಟಿ ಸಮಿತಿ ಹಾಗೂ ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯಗಳ ವ್ಯವಸ್ಥಾಪನ ಮಂಡಳಿಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು.**

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಏಳು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349(2)ನೇ ನಿಯಮದ ಅನುಸಾರವಾಗಿ ಈ ಸಭೆ **ವಸತಿ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಐ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಅಧಿನಿಯಮ 1994 ಕಲಂ 21(1)(viii)ರ ರೀತ್ಯಾ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

..3..

ಒ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ 1992 ಪ್ರಕರಣ 18(1)(9) ರನ್ವಯ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

## 03. ಗಮನ ಸೆಳೆಯುವ ಸೂಚನೆಗಳು

೦1. **ಡಾ॥ ವೈ.ಎ. ನಾರಾಯಣಸ್ವಾಮಿ,** ಅವರು ದಿನಾಂಕ:01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆಯನ್ನು ಮುಂದುವರೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀಯುತರುಗಳಾದ ಬಿ.ಎಂ. ಫಾರೂಖ್, ಕೆ.ಎ. ತಿಪ್ಪೇಸ್ವಾಮಿ ಹಾಗೂ ಶರವಣ ಟಿ.ಎ.** ಅವರುಗಳು ಬೆಂಗಳೂರು ನಗರದ ಸುತ್ತಲೂ ಹೊರ ವರ್ತುಲ ರಸ್ತೆಯನ್ನು ನಿರ್ಮಿಸುವ ಯೋಜನೆಯ ಕಾಮಗಾರಿಯನ್ನು ತುರ್ತಾಗಿ ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3. **ಶ್ರೀ ಎಸ್. ರವಿ** ಅವರು ಯಶವಂತಪುರ ಮಾರುಕಟ್ಟೆಯಿಂದ ಬೆಳ್ಳುಳ್ಳಿ, ಈರುಳ್ಳಿ, ಆಲೂಗೆಡ್ಡೆ ಹಾಗೂ ಶುಂಠಿ ವ್ಯಾಪಾರವನ್ನು ಪೂರ್ಣ ಪ್ರಮಾಣದಲ್ಲಿ ದಾಸನಪುರಕ್ಕೆ ಸ್ಥಳಾಂತರ ಮಾಡದಿರುವುದರಿಂದ ಸಾರ್ವಜನಿಕರು ಹಾಗೂ ವರ್ತಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಮಂಜುನಾಥ ಭಂಡಾರಿ** ಅವರು ಇತ್ತೀಚೆಗೆ ಕರ್ನಾಟಕದಲ್ಲಿ ಗರ್ಭಿಣಿ ಸ್ತ್ರೀಯರು ಪ್ರಸವ ಸಂದರ್ಭದಲ್ಲಿ ಅತಿ ಹೆಚ್ಚು ಮರಣ ಪ್ರಮಾಣ ದಾಖಲಾಗಿದ್ದು, ಮಹಿಳೆ ಹಾಗೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಅನುಷ್ಠಾನದಲ್ಲಿರುವ ತೊಡಕುಗಳು ಹಾಗೂ ಪ್ರಾದೇಶಿಕ ಭಿನ್ನತೆಗಳ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಮರಿತಿಬ್ಬೇಗೌಡ** ಅವರು ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ಟ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ., ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಆರೋಗ್ಯ ಸೌಲಭ್ಯ ವಿಸ್ತರಣೆ ಹಾಗೂ ವಸತಿ ಶಾಲೆಗಳ ಉನ್ನತೀಕರಣ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

..4..

೦೩. **ಶ್ರೀ ಸಿ.ಎನ್. ಮಂಜೇಗೌಡ** ಅವರು 2023-24ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ ಮಕ್ಕಳ ಸಮವಸ್ತ್ರ ಮತ್ತು ಪಠ್ಯ ಪುಸ್ತಕಗಳನ್ನು ವಿತರಿಸುವ ಕುರಿತು ಪ್ರಸ್ತಾಪಿಸುವುದು.

## 05. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) **"**2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ**"** ಎಂದು **ಶ್ರೀ ಯು.ಬಿ. ವೆಂಕಟೇಶ್,** ಅವರು ಸೂಚಿಸುವುದು;

ಆ) **ಶ್ರೀ ಎಂ. ನಾಗರಾಜು,** ಅವರು ಅನುಮೋದಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**